ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಗ್ರಾಮ ಸಹಾಯಕರ ಖಾಯಂಗೊಳಿಸುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) -

171 (1354) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಡಿಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ನೌಕರರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು ; ಇವರು 38 ವರ್ಷಗಳಿಂದ ಕಡಿಮೆ ವೇತನಕ್ಕೆ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಇವರನ್ನು ಸರ್ಕಾರವು ಗ್ರೂಪ್ `ಡಿ' ದರ್ಜೆ ನೌಕರರೆಂದು ಪರಿಗಣಿಸಿ ಆದೇಶ ಹೊರಡಿಸುವುದು ಯಾವಾಗ ;

(ಈ) ಈಗಾಗಲೇ ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಇತರೆ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ದಿನಗೂಲಿ ನೌಕರರನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳನ್ನು ರೂಪಿಸಿ ವಿಲೀನಗೊಳಿಸಿದಂತೆ ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ?